# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ
ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/724 /2021-22, ದಿನಾಂಕ : 25-3-2022

ದಿನಾಂಕ: 19-03-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 6 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 7 | ಶ್ರೀ.ನರಸಿಂಹ | ಕಿ.ಆ.ಪ | 9964177663 |
| 8 | ಶ್ರೀಮತಿ. ಅನ್ನಪೂರ್ಣ | ಶಂಕರಪುರಂ ಪೊಲೀಸ್ ಠಾಣೆ | |

ದಿನಾಂಕ 19-03-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್

ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ನಂತರದಲ್ಲಿ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಆಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ಈ ವಿಷಯಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು. ಅವುಗಳೆಂದರೆ 1). ಹಸಿಕಸ ಮತ್ತು ಒಣಕಸವನ್ನು ವಿಂಗಡಿಸಿ ಪಡೆಯದೆ ಒಟ್ಟಾಗಿ ಸಂಗ್ರಹಿಸುತ್ತಿರುವುದರಿಂದ ನಿವಾಸಿಗಳು ಸಹ ಕಸವನ್ನು ವಿಂಗಡಿಸಿ ನೀಡುತ್ತಿಲ್ಲ, ಆದುದರಿಂದ ಸಾರ್ವಜನಿಕರಿಗೆ ಹಸಿಕಸ ಮತ್ತು ಒಣಕಸವನ್ನು ವಿಂಗಡಿಸಿ ನೀಡುವಂತೆ ಜಾಗೃತಿ ಮೂಡಿಸುವುದು. 2). ಬೀಡಾಡು ಹಸುಗಳು ಮತ್ತು ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವುದು. 3). ಸೊಳ್ಳೆಗಳು ಹಾವಳಿ ಹೆಚ್ಚಾಗಿರುವುದರಿಂದ ಫಾಗಿಂಗ್ ಮಾಡಿಸುವುದು 4). ವಿದ್ಯತ್ ಸರಬರಾಜು ಆಗಾಗಿ ಕಡಿತ ಮಾಡುತ್ತಿದ್ದು, ಇದರಿಂದ ತೊಂದರೆಯಾಗುತ್ತಿರುವ ಬಗ್ಗೆ. 5). ಡಯಾನಗಲ್ ರಸ್ತೆಯ ಎಸ್.ಬಿ.ಐ ಬ್ಯಾಂಕ್‌ನ ಮುಂಭಾಗದಲ್ಲಿ ಪಾದಚಾರಿಗಳಿಗೆ ಅನುಕೂಲವಾಗುವಂತೆ Zebra Crossing ಪಟ್ಟಿಯನ್ನು ಅಳವಡಿಸುವುದು. 6). ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕದಂತೆ ತಡೆಯುವುದು. ಈ ಎಲ್ಲಾ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ ಮಾನ್ಯ ನೋಡಲ್ ಅಧಿಕಾರಿಗಳು ಒಣಕಸ ಮತ್ತು ಹಸಿಕಸವನ್ನು ಬೇರ್ಪಡಿಸಿ ಪಡೆಯುವಂತೆ ಮತ್ತು ಫೌಗಿಂಗ್ ವ್ಯವಸ್ಥೆ ಮಾಡುವಂತೆ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಿದರು. ಉಳಿದ ವಿಷಯಗಳಿಗೆ ಸಂಬಂಧಿಸಿದಂತೆ ಪಶುಸಂಗೋಪನಾ ಇಲಾಖೆ ಅಧಿಕಾರಿಗಳು, ಬೆಸ್ಕಾಂ ಇಲಾಖೆಯ ಅಧಿಕಾರಿಗಳು ಹಾಗೂ ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಅಧಿಕಾರಿಗಳನ್ನು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಲಾಗುವುದೆಂದು ನೋಡಲ್ ಅಧಿಕಾರಿಗಳು ಸಭೆಗೆ ತಿಳಿಸಿದರು.

ನಂತರದಲ್ಲಿ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ರಾಜು ರವರು ಮಾತನಾಡಿ ಈ ಹಿಂದಿನ ಸಭೆಗಳಲ್ಲಿ ಪ್ರಸ್ತಾಪಿಸಲಾಗಿದ್ದ ವಿಷಯಗಳನ್ನು ಸಭೆಯ ಗಮನಕ್ಕೆ ತಂದು ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು. ಅವುಗಳೆಂದರೆ 1).ಆರ್.ವಿ. ರಸ್ತೆಯ ಟೀಚರ್ಸ್ ಕಾಲೇಜ್ ಬಳಿ Bus Shelter ನಿರ್ಮಾಣ ಮಾಡುವುದು 2). ಎಂ.ಎನ್.ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ Bollardsಗಳನ್ನು ಅಳವಡಿಸುವುದು, 3). ಕೆ.ಆರ್ ರಸ್ತೆಯಲ್ಲಿರುವ ನರ್ಸರಿಯನ್ನು ತೆರವುಗೊಳಿಸುವದು. 4) ಶ್ರೀರಾಮ ಮಂದಿರ ರಸ್ತೆಯ ಕನ್ನರ್‌ವೆನ್ಸಿಯಲ್ಲಿರುವ ನಾನ್ ವೆಜ್ ಹೋಟೆಲ್ ಮತ್ತು ಹಾರ್ಡ್ ವೇರ್ ಶಾಪ್‌ನ್ ಒತ್ತುವರಿಯನ್ನು ತೆರವುಗೊಳಿಸುವುದು. 5). ಕನಕಪುರ ರಸ್ತೆ ಮತ್ತು ಎಂ.ಎನ್. ಕೃಷ್ಣರಾವ್ ರಸ್ತೆ ಮಾಧವರಾವ್ ಸರ್ಕಲ್ ಅಕ್ಕಪಕ್ಕದಲ್ಲಿ ವ್ಯಾಪರ ಮಾಡುತ್ತಿರುವ ಹಣ್ಣಿನ ಗಾಡಿಗಳು ಹಾಗೂ ಎಳುನೀರಿನ

ಗಾಡಿಗಳನ್ನು ತೆರವುಗೊಳಿಸುವುದು. 6). ಬಸವನಗುಡಿ ವ್ಯಾಪ್ತಿಯಲ್ಲಿ ಶೇಖರಣೆಯಾಗಿರುವ ತೆಂಗಿನ ಗರಿಗಳನ್ನು ತೆರವುಗೊಳಿಸುವುದು. ಮಾನ್ಯ ನೋಡಲ್ ಅಧಿಕಾರಿಗಳು ಸದರಿ ವಿಷಯಗಳ ಬಗ್ಗೆ ಚರ್ಚಿಸೊ ವಾರ್ಡ್‌ಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಇಲಾಖೆಗಳೊಂದಿಗೆ ಸಂಪರ್ಕಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ. ರಾಜು ರವರು ಪುನಃ ಮಾತನಾಡಿ ಬಸವನಗುಡಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರುಗಳಿಗೆ ದಿನಾಂಕ: 13-03-2022 ರಂದು ಸೀರೆ ಮತ್ತು ಪ್ಯಾಂಟ್ ಷರ್ಟ್‌ಗಳ ಜೊತೆ ಸಿಹಿಯನ್ನು ವಿತರಣೆ ಮಾಡಲಾಗಿರುವುದನ್ನು ಸಭೆಯ ಗಮನಕ್ಕೆ ತಂದರು ಆಗ ಸಭೆಯ ಈ ಕಾರ್ಯಕ್ಕೆ ಮೆಚ್ಚುಗೆ ಮತ್ತು ಸಂತಸವನ್ನು ವ್ಯಕ್ತ ಪಡಿಸಿತು.

ನಂತರ ಎಂ.ಎಂ.ವಿ.ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ. ವೆಂಕಟೇಶ್ ರವರು ಮಾತನಾಡಿ ವಾಸವಿ ದೇವಸ್ಥಾನದ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿಯು ಮುಗಿದಿದ್ದು, ಕೆಲವು ಕಡೆಗಳಲ್ಲಿ ಸಿಮೆಂಟ್ ಕಾಂಕ್ರೀಟ್ ಹಾಕದಿರುವುದು ಮತ್ತು ಪಾದಚಾರಿ ಮಾರ್ಗವು ಹಾಳಾಗಿರುವ ಬಗ್ಗೆ, ಎಂ.ಎಂ.ವಿ. ರಸ್ತೆ ಮತ್ತು ನ್ಯಾಷನಲ್ ಹೈ ಸ್ಕೂಲ್ ರಸ್ತೆಗಳು ಸೇರಿಉವ ಸ್ಥಳದಲ್ಲಿ Road Hump ಹಾಕುವುದು. ಮತ್ತು ಮಾರ್ಕೆಟ್ ರಸ್ತೆ (Food Street) ಅಕ್ಕ ಪಕ್ಕದ ರಸ್ತೆಗಳ ಎರಡೂ ಬದಿಗಳಲ್ಲಿ ಆಹಾರವನ್ನು ಸೇವಿಸಲಲು ಬರುವ ಗ್ರಾಹಕರು ಕಾರುಗಳನ್ನು ನಿಲ್ಲಿಸುತ್ತಿರುವುದರಿಂದ ಬಡಾವಣೆ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದಾಗಿ ತಿಳಿಸಿ ಸೂಕ್ತ ಕ್ರಮ ವಹಿಸುವಂತೆ ಕೋರಿದರು. ಮಾನ್ಯ ನೋಡಲ್ ಅಧಿಕಾರಿಗಳು ಸದರಿ ವಿಷಯಗಳ ಸೂಕ್ತ ಕ್ರಮ ವಹಿಸಲು ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಅಧಿಕಾರಿಗಳು, ಟ್ರಾಫಿಕ್ ಇಂಜಿನಿಯರಿಂಗ್ ಸೆಲ್‌ನ ಅಧಿಕಾರಿಗಳು, ಮತ್ತು ಪೊಲೀಸ್ ಇಲಾಖೆಯ ಸಂಚಾರ ವಿಭಾಗದ ಅಧಿಕಾರಿಗಳನ್ನು ಕೋರುವುದಾಗಿ ಸಭೆಯಲ್ಲಿ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಕಾರ್ಯದರ್ಶಿಗಳು ಹಾಗೂ<br>ಸಹಾಯಕ ಅಭಿಯಂತರರು<br>ವಾರ್ಡ್ -143 ವಿ. ವಿ.ಪುರಂ | ನೋಡಲ್ ಅಧಿಕಾರಿಗಳು<br>ವಾರ್ಡ್ ಸಂಖ್ಯೆ: 143 ಹಾಗೂ<br>ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) |